# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2075 (2362) |
| ಸದಸ್ಯರ ಹೆಸರು | : | ಶ್ರೀ ಗೋವಿಂದ ರಾಜು |
| ಉತ್ತರಿಸಬೇಕಾದ ದಿನಾಂಕ | : | 27.03.2026. |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕೋಲಾರ ನಗರದಲ್ಲಿರುವ ಶ್ರೀ ಟಿ. ಚನ್ನಯ್ಯ ರಂಗಮಂದಿರವನ್ನು 1990ರಲ್ಲಿ ಸ್ಥಾಪಿಸಲಾಗಿದ್ದು, ಕೋಲಾರ ಜಿಲ್ಲೆಯಲ್ಲಿ ಇದೊಂದೆ ರಂಗಮಂದಿರ ವಿದ್ದು, ಜಿಲ್ಲೆಯಾದ್ಯಂತ ಎಲ್ಲಾ ಸರ್ಕಾರಿ ಕಾರ್ಯಕ್ರಮಗಳನ್ನು ಇಲ್ಲಿಯೇ ನಡೆಸಲಾಗುತ್ತಿದ್ದು, ಕೋಲಾರ ಜಿಲ್ಲೆಯಲ್ಲಿ ಅತಿ ಹೆಚ್ಚು ವಿವಿಧ ಸಾಂಸ್ಕೃತಿಕ ಕಲಾವಿದರಿರುವುದು ಸರ್ಕಾರದ ಗಮನದಲ್ಲಿದೆಯೇ; | ಹೌದು, |
| ಆ | ಪ್ರಸ್ತುತ ಈ ಕಟ್ಟಡವು ಶಿಥಿಲಗೊಂಡಿದ್ದು, ಸದರಿ ರಂಗಮಂದಿರವನ್ನು ದುರಸ್ಥಿಪಡಿಸಲು ರೂ.2.21 ಕೋಟಿ ಅನುದಾನ ಬೇಡಿಕೆಯನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, |
| ಇ | ಹಾಗಿದ್ದಲ್ಲಿ, ಶ್ರೀ ಟಿ. ಚನ್ನಯ್ಯ ರಂಗಮಂದಿರವನ್ನು ದುರಸ್ಥಿಪಡಿಸಲು ಯಾವ ಕಾಲಮಿತಿಯೊಳಗೆ ಅನುದಾನವನ್ನು ಬಿಡುಗಡೆ ಮಾಡಲಾಗುವುದು; | ಜಿಲ್ಲಾಧಿಕಾರಿ, ಕೋಲಾರ ಜಿಲ್ಲೆ, ಇವರು ದಿನಾಂಕ:01.10.2024ರಂದು ಕೋಲಾರ ನಗರದಲ್ಲಿರುವ ಶ್ರೀ ಟಿ. ಚನ್ನಯ್ಯ ರಂಗಮಂದಿರ ದುರಸ್ಥಿ ಕಾಮಗಾರಿಗೆ ರೂ.221.00 ಲಕ್ಷಗಳಿಗೆ ಅಂದಾಜು ವೆಚ್ಚ ಪಟ್ಟಿಯನ್ನು ಸಲ್ಲಿಸಿ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದು, ರಂಗಮಂದಿರದ ತುರ್ತು ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳಲು ರೂ.15.00 ಲಕ್ಷಗಳನ್ನು ಜಿಲ್ಲಾಧಿಕಾರಿ ಕೋಲಾರ ಜಿಲ್ಲೆ, ಕೋಲಾರ ಇವರಿಗೆ ಬಿಡುಗಡೆ ಮಾಡಲಾಗಿರುತ್ತದೆ. ಬಿಡುಗಡೆ ಮಾಡಲಾದ ರೂ.15.00 ಲಕ್ಷಗಳ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಹೊರತು ಪಡಿಸಿ ಕೈಗೊಳ್ಳಬೇಕಾಗಿರುವ ಕಾಮಗಾರಿಗಳಿಗೆ ಪರಿಷ್ಕೃತ ಅಂದಾಜು ಪಟ್ಟಿಯನ್ನು ಸಲ್ಲಿಸುವಂತೆ ಜಿಲ್ಲಾಧಿಕಾರಿ ಕೋಲಾರ ಜಿಲ್ಲೆ ಇವರಿಗೆ ದಿನಾಂಕ: 23.03.2026ರಂದು ಪತ್ರ ಬರೆಯಲಾಗಿದ್ದು, ಪ್ರಸ್ತಾವನೆ ಸ್ವೀಕೃತವಾದ ನಂತರ ಪರಿಶೀಲಿಸಲಾಗುವುದು. ವಿವರವನ್ನು **ಅನುಬಂಧ**ದಲ್ಲಿ ಒದಗಿಸಿದೆ. |
| ಈ | ಒಂದು ವೇಳೆ ಅನುದಾನ ಬಿಡಗಡೆ ಮಾಡಲು ಸರ್ಕಾರಕ್ಕೆ ತೊಂದರೆಗಳಿದ್ದರೆ, ಈ ಕಟ್ಟಡವನ್ನು ದುರಸ್ಥಿಪಡಿಸಲು ಕೋಲಾರ ಜಿಲ್ಲೆಯಲ್ಲಿನ ಖಾಸಗಿ ಕಂಪನಿಗಳ ಸಿಎಸ್‌ಆರ್ ಅನುದಾನವನ್ನು ಒದಗಿಸಲು ಕ್ರಮವಹಿಸಲಾಗುವುದೇ? | |

ಸಂಖ್ಯೆ: ಕಸಂವಾ 45 ಕವಿಸ 2026

**(ಶಿವರಾಜ್ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು

ಕರ್ನಾಟಕ ಸರ್ಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರು-560002.
ದೂರವಾಣಿ-080-22213530/22241325 ಫ್ಯಾಕ್ಸ್ : 080-22214379 ಇ-ಮೇಲ್ : kanbhavblr@gmail.com ವೆಬ್ ಸೈಟ್ :
https://kannadasiri.karnataka.gov.in

ಡಿಕೆಸಿ:25011/11/2024 ದಿನಾಂಕ:23.03.2026

ಜಿಲ್ಲಾಧಿಕಾರಿಗಳು
ಕೋಲಾರ ಜಿಲ್ಲೆ
ಕೋಲಾರ

ಮಾನ್ಯರೆ,

ವಿಷಯ: ಕೋಲಾರ ನಗರದ ಶ್ರೀ ಟಿ.ಚೆನ್ನಯ್ಯ ರಂಗಮಂದಿರದ ದುರಸ್ಥಿ ಹಾಗೂ ಒಳಾಂಗಣ ವಿನ್ಯಾಸ ಕಾಮಗಾರಿಗಳಿಗೆ ಹಣಬಳಕೆ ಪ್ರಮಾಣ ಪತ್ರ ಕುರಿತು.

ಉಲ್ಲೇಖ:
1. ತಮ್ಮ ಪತ್ರ ಸಂಖ್ಯೆ:ಕಸಂಇಕೋ/ರಂಮಂದುರಸ್ಥಿ/2024-25, ದಿ:01.10.2024.
2. ಈ ಕಚೇರಿಯ ಸಮ ಸಂಖ್ಯೆ:ಕಚೇರಿ ಆದೇಶ ದಿ:18.02.2025.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರ ಪತ್ರದಲ್ಲಿ ಕೋಲಾರ ನಗರದ ಶ್ರೀ ಟಿ ಚೆನ್ನಯ್ಯ ರಂಗಮಂದಿರದ ದುರಸ್ಥಿ ಹಾಗೂ ಒಳಾಂಗಣ ವಿನ್ಯಾಸ ಕಾಮಗಾರಿಗಳಿಗೆ ಜಿಲ್ಲಾ ನಿರ್ಮಿತಿ ಕೇಂದ್ರ, ಕೋಲಾರ ಇವರು ಸಲ್ಲಿಸಿರುವ ರೂ.221.00ಲಕ್ಷಗಳ ಅಂದಾಜು ಪಟ್ಟಿಯನ್ನು ಸಲ್ಲಿಸಿ, ಬಿಡುಗಡೆ ಮಾಡುವಂತೆ ಕೋರಿರುತ್ತೀರಿ.

ಮುಂದುವರೆದು, ಉಲ್ಲೇಖ(2)ರ ಕಚೇರಿ ಆದೇಶದಲ್ಲಿ ಶ್ರೀ ಟಿ. ಚೆನ್ನಯ್ಯ ರಂಗಮಂದಿರದ ತುರ್ತು ದುರಸ್ಥಿ ಕಾಮಗಾರಿಗೆ ರೂ.15.00ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ.

ಈ ಮೇರೆಗೆ, ಶ್ರೀ ಟಿ. ಚೆನ್ನಯ್ಯ ರಂಗಮಂದಿರದ ತುರ್ತು ದುರಸ್ಥಿ ಕಾಮಗಾರಿಗೆ ಬಿಡುಗಡೆ ಮಾಡಿರುವ ರೂ.15.00ಲಕ್ಷಗಳ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಹಾಗೂ ಈಗಾಗಲೇ ಸಲ್ಲಿಸಿರುವ ಅಂದಾಜು ಪಟ್ಟಿಯಲ್ಲಿನ ಕಾಮಗಾರಿಗಳು ಪುನರಾವರ್ತನೆಯಾಗಿರುವ ಬಗ್ಗೆ ಪರಿಶೀಲಿಸಿ, ಪುನರಾವರ್ತನೆಯಾಗಿದ್ದಲ್ಲಿ (Non Duplicate Certificate) ಸಲ್ಲಿಸುವಂತೆ ಹಾಗೂ ಪುನರಾವರ್ತನೆಯಾಗಿದ್ದಲ್ಲಿ ಪರಿಷ್ಕೃತ ಅಂದಾಜು ವೆಚ್ಚಪಟ್ಟಿಯನ್ನು ಸಲ್ಲಿಸುವಂತೆ ಕೋರಿದೆ.

ತಮ್ಮ ವಿಶ್ವಾಸಿ,

Digitally signed by
B S Manjunathaswamy
Date: 23-03-2026
17:16:49
ನಿರ್ದೇಶಕರು
ಕನ್ನಡ ಮತ್ತು ಸಂಸ್ಕೃತಿ ಇಲಾಖೆ
ಬೆಂಗಳೂರು

ಪ್ರತಿ:

1. ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೋಲಾರ ಜಿಲ್ಲೆ ಕೋಲಾರ ಇವರು ಜಿಲ್ಲಾಧಿಕಾರಿಗಳನ್ನು ಸಂಪರ್ಕಿಸಿ ಅಗತ್ಯ ದಾಖಲೆಗಳನ್ನು ಕಳುಹಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.
2. ಕಡತಕ್ಕೆ